# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1327 |
| ಸದಸ್ಯರ ಹೆಸರು | : | ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ |
| ಉತ್ತರಿಸುವ ದಿನಾಂಕ | : | 24.12.2021 |
| ಉತ್ತರಿಸುವ ಸಚಿವರು | : | ಸಾರಿಗೆ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಾರವಾರ ಜಿಲ್ಲೆಯಲ್ಲಿ ಬಹಳ ಹಿಂದಿನಿಂದಲೂ ವಾಸಿಸುತ್ತಿರುವ ಹಾಲಕ್ಕಿ ಒಕ್ಕಲಿಗರನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಲು ಹಲವು ದಶಕಗಳಿಂದ ನಡೆಯುತ್ತಿರುವ ನಿರಂತರ ಹೋರಾಟಕ್ಕೆ ಇನ್ನೂ ಸರ್ಕಾರ ಸ್ಪಂದಿಸದೆ ಇವರುವುದರಿಂದ ಮುಂದಿನ ದಿನಗಳಲ್ಲಿ ಜಿಲ್ಲೆಯ ಸಮಸ್ತ ಹಾಲಕ್ಕಿ ಒಕ್ಕಲಿಗರು ತಮ್ಮ ಜನಾಂಗವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವ ಬಗ್ಗೆ ಹೋರಾಟ ಮಾಡಲಾಗುವುದೆಯೆಂಬ ವಿಷಯ ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ; (ವಿವರ ನೀಡುವುದು) | ಹಾಲಕ್ಕಿ ಒಕ್ಕಲಿಗರ ಜನಾಂಗವನ್ನು ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸುವ ಬಗ್ಗೆ ಕುಲಶಾಸ್ತ್ರೀಯ ಅಧ್ಯಯನ ವರದಿಯನ್ನು ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು ಇವರಿಂದ ಪಡೆದು ಸಚಿವ ಸಂಪುಟದ ಅನುಮೋದನೆ ಪಡೆದು ದಿನಾಂಕ:21.10.2009ರಂದು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿತ್ತು.<br><br>ನಂತರದಲ್ಲಿ ಕೇಂದ್ರ ಸರ್ಕಾರದ ರಿಜಿಸ್ಟ್ರಾರ್ ಜನರಲ್ ಆಫ್ ಇಂಡಿಯಾರವರು ವರದಿಯನ್ನು ಸೂಕ್ತ ಸಮರ್ಥನೆಯೊಂದಿಗೆ ಸಲ್ಲಿಸಲು ಹಿಂದಿರುಗಿಸಿದ್ದು, ರಿಜಿಸ್ಟ್ರಾರ್ ಜನರಲ್ ಆಫ್ ಇಂಡಿಯಾರವರು ವ್ಯಕ್ತಪಡಿಸಿರುವ ಎಲ್ಲಾ ಅಂಶಗಳನ್ನು ಅಧ್ಯಯನಕ್ಕೆ ಒಳಪಡಿಸುವ ಮೂಲಕ ಮತ್ತೊಮ್ಮೆ ಆಳವಾದ ಕುಲಶಾಸ್ತ್ರೀಯ ಅಧ್ಯಯನ ವರದಿಯನ್ನು ತಯಾರಿಸಿ ನಿರ್ದೇಶಕರು, ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆ, ಮೈಸೂರು ಇವರು ಸರ್ಕಾರಕ್ಕೆ ಸಲ್ಲಿಸಿದ್ದು, ದಿನಾಂಕ:08.02.2017ರಂದು ಕೇಂದ್ರ ಸರ್ಕಾರಕ್ಕೆ ಸದರಿ ವರದಿಯನ್ನು ಸಲ್ಲಿಸಲಾಗಿದ್ದು, ಪ್ರಸ್ತುತ ಪ್ರಸ್ತಾವನೆಯು ಕೇಂದ್ರ ಸರ್ಕಾರದಲ್ಲಿ ಬಾಕಿ ಇರುತ್ತದೆ. |
| ಆ) | ಸದರಿ ವಿಷಯದಲ್ಲಿ ಇವರನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಲು ಇಲ್ಲಿಯವರೆಗೆ ಕೈಗೊಂಡ ಕ್ರಮಗಳೇನು; ಹಾಗೂ ಇವರನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಲು ಇನ್ನೂ ಎಷ್ಟು ಕಾಲಾವಕಾಶ ಬೇಕಾಗುತ್ತದೆ ? (ವಿವರ ನೀಡುವುದು) | |

ಸಕಇ 284 ಎಸ್ ಎಡಿ 2021

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.